ಕರ್ನಾಟಕ ಸರ್ಕಾರ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಆಯುಕ್ತರ ಕಛೇರಿ, ನಂ.16–ಡಿ, 3ನೇ ಮಹಡಿ, ಡಿ. ದೇವರಾಜ ಅರಸು ಭವನ,
ಮಿಲ್ಲರ್ಸ್ ಕೆರೆ ಅಂಗಳ, ವಸಂತನಗರ, ಬೆಂಗಳೂರು–52.

## ಅಭ್ಯರ್ಥಿಗಳಿಗೆ ಸೂಚನೆಗಳು (Instructions to Candidates)

(ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಅಲ್ಪಸಂಖ್ಯಾತ ಅಭ್ಯರ್ಥಿಗಳಿಗೆ ಆಯಾ ಇಲಾಖೆಯಿಂದ ತರಬೇತಿ ನೀಡುತ್ತಿರುವ ಕಾರಣ ಆಯಾ ಇಲಾಖೆಯನ್ನು ಸಂಪರ್ಕಿಸುವುದು)

ಸಂಖ್ಯೆ: CWD-16013/13/2017-BCWD_TRAINING-BCWD ದಿನಾಂಕ: 27/04/2017

1. ಈ ಹಿಂದೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಯಾವುದೇ ಸ್ಪರ್ಧಾತ್ಮಕ ಪರೀಕ್ಷೆಯ ಪರೀಕ್ಷಾ ಪೂರ್ವ ತರಬೇತಿ ಪಡೆದಿದ್ದಲ್ಲಿ, ಅಂತಹ ಅಭ್ಯರ್ಥಿಗಳು ಪುನಃ ಅರ್ಜಿ ಸಲ್ಲಿಸಲು ಮತ್ತು ತರಬೇತಿ ಪಡೆಯಲು ಅರ್ಹರಿರುವುದಿಲ್ಲ.

2. ಕೇಂದ್ರ/ರಾಜ್ಯ ಸರ್ಕಾರದ/ಅನುದಾನಿತ ಸಂಸ್ಥೆಗಳ/ಸಾರ್ವಜನಿಕ ಸ್ವಾಮ್ಯತೆಗೆ ಒಳಪಟ್ಟ ಸಂಸ್ಥೆಗಳಲ್ಲಿನ ನೌಕರರು ಸದರಿ ಕಾರ್ಯಕ್ರಮದಡಿ ಅರ್ಜಿ ಸಲ್ಲಿಸಲು ಮತ್ತು ತರಬೇತಿ ಪಡೆಯಲು ಅರ್ಹರಿರುವುದಿಲ್ಲ.

3. ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ–1, 2(ಎ), 3(ಎ) ಹಾಗೂ 3(ಬಿ) ಗಳಿಗೆ ಸೇರಿದ ಅರ್ಹ ಅಭ್ಯರ್ಥಿಗಳು online ಮೂಲಕ ಅರ್ಜಿಗಳನ್ನು ಸಲ್ಲಿಸುವುದು.

4. 2017–18ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಹಿಂದುಳಿದ ವರ್ಗಗಳ ಅರ್ಹ ಅಭ್ಯರ್ಥಿಗಳಿಗೆ IAS, KAS ಹಾಗೂ ಬ್ಯಾಂಕಿಂಗ್ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ಪರೀಕ್ಷಾ ಪೂರ್ವ ತರಬೇತಿಯನ್ನು ಮಾಸಿಕ ತರಬೇತಿ ಭತ್ಯೆಯೊಂದಿಗೆ ನೀಡಲಾಗುವುದು.

5. IAS, KAS ಹಾಗೂ ಬ್ಯಾಂಕಿಂಗ್ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಅಭ್ಯರ್ಥಿಗಳು ಒಂದೇ ಅರ್ಜಿಯನ್ನು ಸಲ್ಲಿಸುವುದು. ಒಬ್ಬ ಅಭ್ಯರ್ಥಿಗೆ ಒಂದು ತರಬೇತಿಯನ್ನು ಪಡೆಯಲು ಮಾತ್ರ ಅವಕಾಶವಿರುತ್ತದೆ.

6. ತರಬೇತಿಯ ಅವಧಿ:

| ಕ್ರ. ಸಂ. | ಪರೀಕ್ಷಾ ಪೂರ್ವ ತರಬೇತಿ ಹೆಸರು | ವಿಷಯ | ತರಬೇತಿ ಅವಧಿ |
|---|---|---|---|
| 1 | ಐ.ಎ.ಎಸ್. | ಪೂರ್ವಭಾವಿ ಮತ್ತು ಮುಖ್ಯ ಪರೀಕ್ಷೆ (General Studies and 1 Optional Subject) | 7–9 ತಿಂಗಳು |
| 2 | ಕೆ.ಎ.ಎಸ್. | ಪೂರ್ವಭಾವಿ ಮತ್ತು ಮುಖ್ಯ ಪರೀಕ್ಷೆ | ಕನಿಷ್ಠ 7 ತಿಂಗಳು |
| 3 | ಬ್ಯಾಂಕಿಂಗ್ ಪ್ರೊಬೇಷನರಿ ಆಫೀಸರ್ಸ್ | ಬ್ಯಾಂಕಿಂಗ್ ನೇಮಕಾತಿ ಪರೀಕ್ಷೆಯ ಸಮಗ್ರ ವಿಷಯಗಳು | ಕನಿಷ್ಠ 2 ತಿಂಗಳು |

7. 2005ನೇ ಸಾಲಿನ ನಂತರದಲ್ಲಿ SSLC ಉತ್ತೀರ್ಣರಾದ ಅಭ್ಯರ್ಥಿಗಳ ನೋಂದಣಿ ಸಂಖ್ಯೆ, ಉತ್ತೀರ್ಣರಾದ ವರ್ಷ, ಜನ್ಮ ದಿನಾಂಕವನ್ನು ನಮೂದಿಸಿದ ಕೂಡಲೇ ಅವರ ಇತರೆ ಮಾಹಿತಿಗಳು ಅರ್ಜಿಯಲ್ಲಿ automatically generate ಆಗುತ್ತದೆ.

8. 2005ನೇ ಸಾಲಿನ ಪೂರ್ವದಲ್ಲಿ SSLC ಉತ್ತೀರ್ಣರಾದ ಅಭ್ಯರ್ಥಿಗಳು ತಮ್ಮ ಹತ್ತನೇ ತರಗತಿಯ ಮೂಲ ಅಂಕಪಟ್ಟಿಯೊಂದಿಗೆ ಹತ್ತಿರದ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗೆ ಹೋಗಿ ಅಂಕಪಟ್ಟಿಯ ವಿವರವನ್ನು entry ಮಾಡಿಸಿ, ನಂತರ ಅರ್ಜಿ ಸಲ್ಲಿಸುವುದು.

9. CBSE ಮತ್ತು ICSE ಹಾಗೂ ಇತರೆ ರಾಜ್ಯಗಳಲ್ಲಿ ಹತ್ತನೇ ತರಗತಿಯಲ್ಲಿ ಉತ್ತೀರ್ಣರಾಗಿರುವ ಮತ್ತು ಸದರಿ ಕಾರ್ಯಕ್ರಮದಡಿ ಪರೀಕ್ಷಾ ಪೂರ್ವ ತರಬೇತಿಗೆ ಅರ್ಹರಿರುವ ಅಭ್ಯರ್ಥಿಗಳು ತಮ್ಮ ಹತ್ತನೇ ತರಗತಿಯ ಮೂಲ ಅಂಕಪಟ್ಟಿಯೊಂದಿಗೆ ಹತ್ತಿರದ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗೆ ಹೋಗಿ ಅಂಕಪಟ್ಟಿಯ ವಿವರವನ್ನು entry ಮಾಡಿಸಿ, ನಂತರ ಅರ್ಜಿ ಸಲ್ಲಿಸುವುದು.

10. ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗಳ ವಿಳಾಸದ ವಿವರಗಳು ಇಲಾಖಾ ವೆಬ್‌ಸೈಟ್‌ನಲ್ಲಿ ಲಭ್ಯವಿರುತ್ತದೆ.

11. ಅರ್ಹತೆ:

a) ಅಭ್ಯರ್ಥಿಯು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು.

b) ಹಿಂದುಳಿದ ವರ್ಗಗಳಾದ ಪ್ರವರ್ಗ-1, 2(ಎ), 3(ಎ) ಅಥವಾ 3(ಬಿ) ಗಳಿಗೆ ಸೇರಿರಬೇಕು.

c) ಅಭ್ಯರ್ಥಿಯ ಮತ್ತು ಕುಟುಂಬದ ಒಟ್ಟು ವಾರ್ಷಿಕ ಆದಾಯ ಮಿತಿ –

| ಕ್ರ. ಸಂ. | ಪ್ರವರ್ಗ | ಆದಾಯ ಮಿತಿ |
|---|---|---|
| 1 | ಪ್ರವರ್ಗ 1 | ರೂ.4.50 ಲಕ್ಷ |
| 2 | ಪ್ರವರ್ಗ 2(ಎ), 3(ಎ) ಮತ್ತು 3(ಬಿ) | ರೂ.3.50 ಲಕ್ಷ |

d) ವಿದ್ಯಾರ್ಹತೆ – ಅಂಗೀಕೃತ ವಿಶ್ವವಿದ್ಯಾಲಯದಿಂದ ಪದವಿಯನ್ನು ಪಡೆದಿರಬೇಕು.

e) ತರಬೇತಿಯನ್ನು ಪಡೆಯಲು ನಿಗದಿಪಡಿಸಿರುವ ವಯೋಮಿತಿ (20.05.2017 ಕ್ಕೆ) –

| Sl. No. | Course | If come under State Category/central OBC/PH | Minimum | | | Maximum |
|---|---|---|---|---|---|---|
| | | | Age | D.O.B | Age | D.O.B |
| 1 | IAS | Central OBC & State Cat-1/2a/ 3a/3b castes | 21 | 20.05.1996 | 34 | 20.05.1983 |
| | | Only in State - Cat-1/2a/ 3a/3b castes | 21 | 20.05.1996 | 31 | 20.05.1986 |
| | | All Cat-PH | 21 | 20.05.1996 | 41 | 20.05.1976 |
| 2 | KAS | Cat-2a, 3a, 3b | 21 | 20.05.1996 | 37 | 20.05.1980 |
| | | Cat-1 | 21 | 20.05.1996 | 39 | 20.05.1978 |
| | | All Cat-PH | 21 | 20.05.1996 | 44 | 20.05.1973 |

| | | | | | | |
|---|---|---|---|---|---|---|
| 3 | Banking P.O | Central OBC & State Cat-1/2a/ 3a/3b castes | 21 | 20.05.1996 | 32 | 20.05.1985 |
| | | Only in State - Cat-1/2a/ 3a/3b castes | 21 | 20.05.1996 | 29 | 20.05.1988 |
| | | All Cat-PH | 21 | 20.05.1996 | 39 | 20.05.1978 |

f) ಅಂಗವಿಕಲ ಅಭ್ಯರ್ಥಿಗಳಿಗೆ ಗರಿಷ್ಠ ವಯಸ್ಸಿನಲ್ಲಿ ರಿಯಾಯಿತಿ ಇರುವುದು. ಈ ರಿಯಾಯಿತಿ ಪಡೆಯಲಿಚ್ಛಿಸುವ ಅರ್ಹ ಅಭ್ಯರ್ಥಿಗಳು Online ಮುಖಾಂತರ ಅರ್ಜಿ ಸಲ್ಲಿಸುವಾಗ ಅರ್ಜಿ ನಮೂನೆಯ ಮೊದಲನೇ ಸಾಲಿನಲ್ಲಿರುವ Radio button ಅನ್ನು ಆಯ್ಕೆ ಮಾಡಿಕೊಳ್ಳಬೇಕು.

12. ಅಭ್ಯರ್ಥಿಯ ಪಾಸ್‌ಪೋರ್ಟ್ ಅಳತೆಯ ಇತ್ತೀಚಿನ ಭಾವಚಿತ್ರ ಹಾಗೂ ಅದರ ಕೆಳಗೆ ಅಭ್ಯರ್ಥಿಯ ಸಹಿ ಬರುವಂತೆ Scan ಮಾಡಿ JPEG format (30-50 kilo byte ಗೆ ಒಳಪಟ್ಟು) ನಲ್ಲಿ Upload ಮಾಡಬೇಕು.

13. ಅಭ್ಯರ್ಥಿಯು ತಾನು ಪಡೆಯಲು ಇಚ್ಛಿಸುವ ತರಬೇತಿಗೆ ತಕ್ಕಂತೆ (ಅಭ್ಯರ್ಥಿಯ ವಯಸ್ಸನ್ನು ಆಧರಿಸಿ ತರಬೇತಿಯ ಆಯ್ಕೆಗಳು ಲಭ್ಯವಾಗುತ್ತವೆ) ಸಾಮಾನ್ಯ ಪ್ರವೇಶ ಪರೀಕ್ಷೆಯ ಆದ್ಯತೆಯನ್ನು ಅರ್ಜಿಯ ನಿಗದಿತ ಸ್ಥಳದಲ್ಲಿ ಸ್ಪಷ್ಟವಾಗಿ ನಮೂದಿಸಬೇಕು. ಆದ್ಯತೆಗಳು ಈ ಮುಂದಿನಂತಿರುತ್ತವೆ –

    a. IAS.
    b. KAS.
    c. Banking.
    d. IAS/KAS.
    e. IAS//Banking.
    f. KAS/Banking.
    g. IAS/KAS/Banking.

14. ಅಭ್ಯರ್ಥಿಯ ಬ್ಯಾಂಕ್ ಖಾತೆಯ ವಿವರ:

    ಅಭ್ಯರ್ಥಿಯು ಯಾವುದೇ ರಾಷ್ಟ್ರೀಕೃತ ಬ್ಯಾಂಕ್‌ನಲ್ಲಿ ಖಾತೆಯನ್ನು ಹೊಂದಿದ್ದು, ಬ್ಯಾಂಕ್‌ನ ಹೆಸರು, ಶಾಖೆ, ಖಾತೆ ಸಂಖ್ಯೆ ಮತ್ತು IFSC ಕೋಡ್‌ಗಳನ್ನು ಕಡ್ಡಾಯವಾಗಿ ಅರ್ಜಿಯ ನಿಗದಿತ ಸ್ಥಳದಲ್ಲಿ ನಮೂದಿಸುವುದು.

    ತರಬೇತಿಗೆ ಆಯ್ಕೆಯಾದ ಅಭ್ಯರ್ಥಿಗಳ ತರಬೇತಿ ಭತ್ಯೆಯು ಅಭ್ಯರ್ಥಿಗಳ ಬ್ಯಾಂಕ್ ಖಾತೆಗೆ ಜಮಾ ಮಾಡುವುದರಿಂದ ಅಭ್ಯರ್ಥಿಯ ಬ್ಯಾಂಕ್ ಖಾತೆಯ ವಿವರವನ್ನು ತಪ್ಪಿಲ್ಲದೇ ನಮೂದಿಸುವುದು.

15. IAS, KAS ಮತ್ತು ಬ್ಯಾಂಕಿಂಗ್ ಪರೀಕ್ಷೆಗಳ ಪರೀಕ್ಷಾ ಪೂರ್ವ ತರಬೇತಿಗಳ ಆಯ್ಕೆಗೆ ಪ್ರತ್ಯೇಕವಾಗಿ ಸಾಮಾನ್ಯ ಪ್ರವೇಶ ಪರೀಕ್ಷೆಗಳನ್ನು ನಡೆಸಲಾಗುವುದು.

16. ಸಾಮಾನ್ಯ ಪ್ರವೇಶ ಪರೀಕ್ಷೆಯ syllabus: ಐ.ಎ.ಎಸ್, ಕೆ.ಎ.ಎಸ್ ಹಾಗೂ ಬ್ಯಾಂಕಿಂಗ್ ಪರೀಕ್ಷೆಗಳ ಪರೀಕ್ಷಾ ಪೂರ್ವ ತರಬೇತಿಗಳಿಗೆ ಆಯಾ ಪ್ರಾಧಿಕಾರಗಳು ನಿಗದಿಪಡಿಸಿರುವ ಪಠ್ಯಕ್ರಮದನ್ವಯ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ನಡೆಸಲಾಗುವುದು.

- ಐ.ಎ.ಎಸ್. ಮತ್ತು ಕೆ.ಎ.ಎಸ್. ಪರೀಕ್ಷಾ ಪೂರ್ವ ತರಬೇತಿಗಳಿಗೆ ಕನ್ನಡ ಮತ್ತು ಇಂಗ್ಲೀಷ್ ವ್ಯಾಕರಣ ಹೊಂದಿಕೊಂಡು, 200 word limit ಮಾಡುವಂತಹ 5 ವಿಭಿನ್ನ ವಿಷಯಗಳಿಗೆ Essay writing ಅನ್ನು 25 ಅಂಕಗಳಿಗೆ ಹಾಗೂ 125 ಅಂಕಗಳಿಗೆ ಬಹು ಆಯ್ಕೆ ಪ್ರಶ್ನೆಗಳು ಇರುವಂತೆ ಸಾಮಾನ್ಯ ಪ್ರವೇಶ ಪರೀಕ್ಷೆಗಳನ್ನು ಪ್ರತ್ಯೇಕವಾಗಿ ನಡೆಸಲಾಗುವುದು.
- ಬ್ಯಾಂಕಿಂಗ್ ಪರೀಕ್ಷಾ ಪೂರ್ವ ತರಬೇತಿಗಾಗಿ ಒಟ್ಟು 100 ಅಂಕಗಳಿಗೆ ಬಹು ಆಯ್ಕೆ ಪ್ರಶ್ನೆಗಳು ಇರುವಂತೆ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ಪ್ರತ್ಯೇಕವಾಗಿ ನಡೆಸಲಾಗುವುದು.

17. ಸಾಮಾನ್ಯ ಪ್ರವೇಶ ಪರೀಕ್ಷಾ ಕೇಂದ್ರಗಳು:

a) ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ಬೆಂಗಳೂರು (ನಗರ), ಮೈಸೂರು, ಧಾರವಾಡ, ಕಲಬುರ್ಗಿ, ಬೆಳಗಾವಿ, ಮಂಗಳೂರು, ಶಿವಮೊಗ್ಗ, ತುಮಕೂರು ಮತ್ತು ಕೊಪ್ಪಳ ಜಿಲ್ಲಾ ಕೇಂದ್ರಗಳಲ್ಲಿ ಏಕ ಕಾಲಕ್ಕೆ ನಡೆಸಲಾಗುವುದು.

b) ಅಭ್ಯರ್ಥಿಯು ಒಮ್ಮೆ ಆಯ್ಕೆ ಮಾಡಿಕೊಂಡ ಪರೀಕ್ಷಾ ಜಿಲ್ಲೆಯನ್ನು ಮತ್ತೆ ಬದಲಾಯಿಸಲು ಅವಕಾಶವಿರುವುದಿಲ್ಲ.

c) ಸಾಮಾನ್ಯ ಪ್ರವೇಶ ಪರೀಕ್ಷೆ ನಡೆಯುವ ದಿನಾಂಕ, ಸಮಯ ಮತ್ತು ಪರೀಕ್ಷಾ ಕೇಂದ್ರಗಳ ವಿವರವನ್ನು ನಂತರ ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು.

18. ಸಾಮಾನ್ಯ ಪ್ರವೇಶ ಪರೀಕ್ಷೆಗೆ ಹಾಜರುಪಡಿಸಬೇಕಾದ ದಾಖಲೆಗಳು:

- ಅಭ್ಯರ್ಥಿಗಳು ಸಲ್ಲಿಸಿರುವ ಆನ್‌ಲೈನ್ ಅರ್ಜಿ ಪ್ರತಿ/ಸ್ವೀಕೃತಿ ಪ್ರತಿ.
- ಅಭ್ಯರ್ಥಿಯ ಭಾವಚಿತ್ರ ಮತ್ತು ವಿಳಾಸವಿರುವ ಯಾವುದಾದರೊಂದು ಅಧಿಕೃತ ಗುರುತಿನ ಚೀಟಿ.

19. ಆಯ್ಕೆ ವಿಧಾನ:

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾವತಿಯಿಂದ ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಗಳಿಸಿದ ಅಂಕಗಳು, ಪ್ರವರ್ಗವಾರು ಮೀಸಲಾತಿ, ವಿವಿಧ ಸಂಸ್ಥೆಗಳಲ್ಲಿ ಲಭ್ಯವಿರುವ ಹಾಗೂ ಆ ಸಂಸ್ಥೆಗಳಿಗೆ ಸರ್ಕಾರ ನಿಗದಿಪಡಿಸುವ ಭೌತಿಕ ಗುರಿಗೆ ಅನುಗುಣವಾಗಿ ಅಭ್ಯರ್ಥಿಗಳನ್ನು ಅವರ ಮೂಲ ದಾಖಲೆಗಳ ಪರಿಶೀಲನೆ ಮಾಡಿದ ನಂತರ ತರಬೇತಿಗಾಗಿ ಕೌನ್ಸಿಲಿಂಗ್ ಮೂಲಕ ಆಯ್ಕೆ ಮಾಡಿ ನಿಯೋಜಿಸಲಾಗುವುದು.

20. ಮೂಲ ದಾಖಲೆಗಳ ಪರಿಶೀಲನೆ:-

ತಾತ್ಕಾಲಿಕ ಆಯ್ಕೆಪಟ್ಟಿಯಲ್ಲಿನ ಅಭ್ಯರ್ಥಿಗಳು ನಿಗದಿತ ದಿನಾಂಕದಂದು ಕಡ್ಡಾಯವಾಗಿ ಸಲ್ಲಿಸಬೇಕಾದ ಮೂಲ ದಾಖಲೆಗಳು (ತಾತ್ಕಾಲಿಕ ಆಯ್ಕೆ ಪಟ್ಟಿ, ಮೂಲ ದಾಖಲೆಗಳ ಪರಿಶೀಲನಾ ದಿನಾಂಕ, ಸ್ಥಳ ಹಾಗೂ ಸಮಯವನ್ನು ನಂತರ ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು) –

- ಅಭ್ಯರ್ಥಿಯ ಹೆಸರಿನಲ್ಲಿರುವ ಜಾತಿ ಮತ್ತು ಆದಾಯ ದೃಢೀಕರಣ ಪತ್ರ.
- ಪಾಸ್‌ಪೋರ್ಟ್ ಅಳತೆಯ ಇತ್ತೀಚಿನ 2 ಭಾವಚಿತ್ರ.
- ಎಸ್.ಎಸ್.ಎಲ್.ಸಿ. ಅಂಕ ಪಟ್ಟಿ.
- ಘಟಿಕೋತ್ಸವ ಪ್ರಮಾಣ ಪತ್ರ/ತಾತ್ಕಾಲಿಕ ಪದವಿ ಪ್ರಮಾಣ ಪತ್ರ (Convocation Certificate/Provisional Degree Certificate).
- ಕರ್ನಾಟಕ ರಾಜ್ಯದ ನಿವಾಸಿ ಎಂಬ ಬಗ್ಗೆ ವಾಸಸ್ಥಳ ಪ್ರಮಾಣ ಪತ್ರ.

- ಅಭ್ಯರ್ಥಿಯ ಬ್ಯಾಂಕ್ ಖಾತೆ ವಿವರ (ಬ್ಯಾಂಕ್ ಪಾಸ್ ಪುಸ್ತಕದಲ್ಲಿ ಬ್ಯಾಂಕ್ ಹೆಸರು, ಬ್ಯಾಂಕ್ ಶಾಖೆಯ ಹೆಸರು, IFSC Code, ಅಭ್ಯರ್ಥಿಯ ಹೆಸರು, ಬ್ಯಾಂಕ್ ಖಾತೆ ಸಂಖ್ಯೆ ವಿವರ ಇರುವ ಪುಟದ ಜೆರಾಕ್ಸ್ ಪ್ರತಿ)
- ಮೇಲ್ಕಾಣಿಸಿದ ಮೂಲ ದಾಖಲೆಗಳ ಒಂದು ಸೆಟ್ ದೃಢೀಕೃತ ಅಥವಾ ಸ್ವತಃ ದೃಢೀಕರಿಸಿರುವ ಜೆರಾಕ್ಸ್ ಪ್ರತಿಯನ್ನು ಸಲ್ಲಿಸಬೇಕು.

21. ಅಂತಿಮವಾಗಿ ಅರ್ಜಿಯನ್ನು submit ಮಾಡುವ ಮುನ್ನ ಎಲ್ಲಾ ಅಂಶಗಳೂ ಸರಿಯಾಗಿರುವ ಬಗ್ಗೆ Preview ನೋಡಿ ಖಚಿತ ಪಡಿಸಿಕೊಳ್ಳಬೇಕು. ಸರಿಯಾಗಿ ಭರ್ತಿ ಮಾಡದೇ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
22. ಅಭ್ಯರ್ಥಿಯು ತಪ್ಪು ಮಾಹಿತಿ ನೀಡಿರುವುದು/ಅನರ್ಹ ಅಭ್ಯರ್ಥಿಯೆಂದು ಯಾವುದೇ ಹಂತದಲ್ಲಿ ಕಂಡು ಬಂದಲ್ಲಿ ಅಂತಹ ಅಭ್ಯರ್ಥಿಯ ವಿರುದ್ಧ ನಿಯಮಾನುಸಾರ ಸೂಕ್ತ ಕ್ರಮ ಜರುಗಿಸಲಾಗುವುದು.
23. ಅರ್ಜಿಯ ಪ್ರತಿಯನ್ನು Print option ನೀಡುವ ಮೂಲಕ ಪಡೆಯಬಹುದು.
24. **Online ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 20-05-2017.**
25. Online ಮೂಲಕ ಅರ್ಜಿಯನ್ನು ಭರ್ತಿ ಮಾಡುವಾಗ ತಾಂತ್ರಿಕ ತೊಂದರೆ ಆದಲ್ಲಿ ಸಂಪರ್ಕಿಸಬಹುದಾದ ಸಹಾಯ ವಾಣಿ: 080-65970009 (ಕಛೇರಿ ಕಾರ್ಯನಿರ್ವಹಿಸುವ ದಿನಗಳು ಮತ್ತು ಸಮಯದಲ್ಲಿ ಮಾತ್ರ)

ಸಹಿ/-
ಆಯುಕ್ತರು,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಬೆಂಗಳೂರು.